# ಕರ್ನಾಟಕ ವಿಧಾನ ಪರಿಷತ್ತು

| | | |
|---|---|---|
| **ಚುಕ್ಕೆ ಗುರುತಿಲ್ಲದ ಪ್ರಶ್ನೆ ಸಂಖ್ಯೆ** | : | **724 (880)** |
| **ಸದಸ್ಯರ ಹೆಸರು** | : | **ಶ್ರೀ ಕೆ.ಅಬ್ದುಲ್ ಜಬ್ಬರ್ (ವಿಧಾನಸಭಾ ಕ್ಷೇತ್ರ)** |
| **ಉತ್ತರಿಸಬೇಕಾದ ದಿನಾಂಕ** | : | **15.12.2025** |
| **ಉತ್ತರಿಸುವ ಸಚಿವರು** | : | **ಶಾಲಾ ಶಿಕ್ಷಣ ಮತ್ತು ಸಾಕ್ಷರತಾ ಸಚಿವರು** |

| ಕ್ರ. ಸಂ | ಪ್ರಶ್ನೆ | ಉತ್ತರ |
|---|---|---|
| ಅ | ದಾವಣಗೆರೆ ಜಿಲ್ಲೆಯಲ್ಲಿ ಪ್ರಸ್ತುತ ಕಾರ್ಯನಿರ್ವಹಿಸುತ್ತಿರುವ ಪ್ರಾಥಮಿಕ ಮತ್ತು ಪ್ರೌಢಶಾಲೆಗಳೆಷ್ಟು; ಸದರಿ ಶಾಲೆಗಳ ಕಟ್ಟಡಗಳ ಪೈಕಿ ಶಿಥಿಲಾವಸ್ಥೆಗೆ ಬಂದಿರುವ ಕಟ್ಟಡಗಳ ಸಂಖ್ಯೆ ಎಷ್ಟು; (ಸಂಪೂರ್ಣ ವಿವರ ಒದಗಿಸುವುದು) | ದಾವಣಗೆರೆ ಜಿಲ್ಲೆಯಲ್ಲಿ ಕಾರ್ಯ ನಿರ್ವಹಿಸುತ್ತಿರುವ ಪ್ರಾಥಮಿಕ ಮತ್ತು ಪ್ರೌಢಶಾಲೆಗಳ ಸಂಖ್ಯೆ ಕೆಳಕಂಡಂತಿದೆ. |

| **ಆಡಳಿತ ಮಂಡಳಿಯ ವಿಧ** | **ಶಾಲೆಯ ವಿಧ/ಶಾಲೆಗಳ ಸಂಖ್ಯೆ** | | | |
|---|---|---|---|---|
| | **ಕಿ.ಪ್ರಾ.** | **ಹಿ.ಪ್ರಾ.** | **ಪ್ರೌಢ** | **ಒಟ್ಟು** |
| ಸರ್ಕಾರಿ ಶಾಲೆಗಳ ಸಂಖ್ಯೆ ಶಾಲೆಗಳ ಸಂಖ್ಯೆ | 476 | 576 | 135 | **1187** |
| ಅನುದಾನಿತ ಶಾಲೆಗಳ ಸಂಖ್ಯೆ | 6 | 123 | 171 | **300** |
| ಅನುದಾನ ರಹಿತ ಶಾಲೆಗಳ ಸಂಖ್ಯೆ | 56 | 202 | 195 | **453** |
| ಕೇಂದ್ರ ಸರ್ಕಾರದ ಶಾಲೆಗಳು ಮತ್ತು ರಾಜ್ಯ ಸರ್ಕಾರದಡಿ ಶಾಲಾ ಶಿಕ್ಷಣ ಇಲಾಖೆಯ ಶಾಲೆಗಳನ್ನು ಹೊರತುಪಡಿಸಿದ ಇತರೆ ಇಲಾಖೆಯಡಿ ನಡೆಯುತ್ತಿರುವ ಶಾಲೆಗಳ ಸಂಖ್ಯೆ | 0 | 2 | 46 | **48** |
| **ಒಟ್ಟು ಶಾಲೆಗಳ ಸಂಖ್ಯೆ** | **538** | **903** | **547** | **1988** |

<table>
<tr><td></td><td></td><td>ಸದರಿ ಶಾಲೆಗಳಲ್ಲಿನ ಕೊಠಡಿಗಳ ಸ್ಥಿತಿಗತಿಯ ವಿವರ ಕೆಳಕಂಡಂತಿದೆ.
<table>
<tr><th>ಒಟ್ಟು ಸರ್ಕಾರಿ ಶಾಲೆಗಳ ಸಂಖ್ಯೆ</th><th>ಒಟ್ಟು ಶಾಲಾ ಕೊಠಡಿಗಳ ಸಂಖ್ಯೆ</th><th>ಒಟ್ಟು ಇತರೆ ಕೊಠಡಿಗಳ ಸಂಖ್ಯೆ</th><th>ಮೈನರ್ ದುರಸ್ತಿ ಅಗತ್ಯವಿರುವ ಶಾಲಾ ಕೊಠಡಿಗಳ ಸಂಖ್ಯೆ</th><th>ಮೇಜರ್ ದುರಸ್ತಿ ಅಗತ್ಯವಿರುವ ಶಾಲಾ ಕೊಠಡಿಗಳ ಸಂಖ್ಯೆ</th></tr>
<tr><td>1187</td><td>6721</td><td>2676</td><td>768</td><td>1201</td></tr>
</table></td></tr>
<tr><td>ಆ</td><td>ಇದ್ದಲ್ಲಿ, ಅಂತಹ ಶಿಥಿಲಾವಸ್ಥೆಯಲ್ಲಿರುವ ಕೊಠಡಿಗಳನ್ನು ದುರಸ್ತಿ ಮಾಡಲು ಹಾಗೂ ದುರಸ್ತಿ ಮಾಡಲು ಬಾರದಂತಹ ಕೊಠಡಿಗಳಿಗೆ ಹೊಸ ಕೊಠಡಿಗಳನ್ನು ನಿರ್ಮಾಣ ಮಾಡಲು ಸರ್ಕಾರ ಕ್ರಿಯಾ ಯೋಜನೆ ರೂಪಿಸಿದೆಯೇ;</td><td rowspan="2">ರಾಜ್ಯದ ಸರ್ಕಾರಿ ಶಾಲೆಗಳಲ್ಲಿ 2025-26ನೇ ಸಾಲಿಗೆ ಕೊಠಡಿಗಳ ದುರಸ್ಥಿ ಕಾಮಗಾರಿಗೆ ರೂ.100.00 ಕೋಟಿ ಅನುದಾನ ನಿಗದಿಯಾಗಿದ್ದು, ಈ ಸಂಬಂಧ ಅಗತ್ಯತೆ ಮತ್ತು ಆದ್ಯತೆಯನಸಾರ ಕ್ರಿಯಾ ಯೋಜನೆ ಸಿದ್ಧಪಡಿಸಿದ್ದು, ಅನುಮೋದನಾ ಹಂತದಲ್ಲಿರುತ್ತದೆ.<br><br>2025-26ನೇ ಸಾಲಿಗೆ ಹೊಸ ಕೊಠಡಿಗಳ ನಿರ್ಮಾಣಕ್ಕೆ ಸಂಬಂಧಿಸಿದ ದಾವಣಗೆರೆ ಜಿಲ್ಲೆಯಲ್ಲಿನ 42 ಶಾಲೆಗಳಿಗೆ ರೂ.1298.10 ಲಕ್ಷಗಳಲ್ಲಿ 76 ಕೊಠಡಿಗಳ ನಿರ್ಮಾಣ ಕಾಮಗಾರಿಗೆ ಅನುಮೋದನೆ ನೀಡಲಾಗಿದೆ.<br><br>ಕೇಂದ್ರ ಪುರಸ್ಕೃತ ಯೋಜನೆಯಾದ ಸಮಗ್ರ ಶಿಕ್ಷಣ-ಕರ್ನಾಟಕ ಯೋಜನೆಯಡಿ 2025-26ನೇ ಸಾಲಿನಲ್ಲಿ ಶಾಲಾ ಕಟ್ಟಡ ನಿರ್ಮಾಣಕ್ಕಾಗಿ ರೂ.4359.00 ಲಕ್ಷಗಳು ಮತ್ತು ರಿಪೇರಿಗಾಗಿ ರೂ. 2816.3 ಲಕ್ಷಗಳ ಅನುದಾನ ನಿಗಧಿಪಡಿಸಲಾಗಿದ್ದು, ಕ್ರಿಯಾ ಯೋಜನೆ ಅಂತಿಮಗೊಳಿಸುವ ಪ್ರಕ್ರಿಯೆ ಚಾಲನೆಯಲ್ಲಿದೆ.<br><br>ಅನುದಾನದ ಲಭ್ಯತೆಯನ್ನಾಧರಿಸಿ ಹಂತ ಹಂತವಾಗಿ ಶಾಲಾ ಕೊಠಡಿಗಳ ದುರಸ್ಥಿ ಕಾರ್ಯವನ್ನು ಹಾಗೂ ನಿರ್ಮಾಣ ಕಾರ್ಯವನ್ನು ಕೈಗೊಳ್ಳಲಾಗುತ್ತಿದೆ.</td></tr>
<tr><td>ಇ</td><td>ಇದ್ದಲ್ಲಿ, ಅದಕ್ಕೆ ಮೀಸಲಿಟ್ಟ ಅನುದಾನವೆಷ್ಟು; ಸದರಿ ಅನುದಾನದಲ್ಲಿ ಎಷ್ಟು ಶಾಲಾ ಕೊಠಡಿಗಳ ದುರಸ್ತಿ ಮತ್ತು ನಿರ್ಮಾಣ ಕಾರ್ಯಕೈಗೊಳ್ಳಲಾಗಿದೆ; ಬಾಕಿ ಇರುವ ಕೊಠಡಿಗಳ ದುರಸ್ತಿ ಹಾಗೂ ನಿರ್ಮಾಣ ಕಾರ್ಯ ಯಾವ ಹಂತದಲ್ಲಿ ಮುಕ್ತಾಯವಾಗಲಿವೆ?</td></tr>
</table>

**ಇಪಿ 399 ಯೋಸಕ 2025**

(ಎಸ್.ಮಧುಬಂಗಾರಪ್ಪ)

**ಶಾಲಾ ಶಿಕ್ಷಣ ಮತ್ತು ಸಾಕ್ಷರತಾ ಸಚಿವರು**